## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 420 |
| ಸದಸ್ಯರ ಹೆಸರು: | ಶ್ರೀ ನಿರಾಣಿ ಹಣಮಂತ್ ರುದ್ರಪ್ಪ |
| ಉತ್ತರಿಸುವ ಸಚಿವರು: | ಸಾರಿಗೆ ಸಚಿವರು |
| ಉತ್ತರಿಸುವ ದಿನಾಂಕ: | 19.08.2026 |

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಉತ್ತರ ಕರ್ನಾಟಕ ಭಾಗದ ಸಾರಿಗೆ ಸಂಸ್ಥೆಗಳಾದ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (NWKRTC) ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (KKRTC) ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಂಚಾರಕ್ಕೆ ಇರುವ ಒಟ್ಟು ಬಸ್ಸುಗಳ ಸಂಖ್ಯೆ ಎಷ್ಟು; ಇದರಲ್ಲಿ ಪ್ರಸ್ತುತ ಕಾರ್ಯಾಚರಣೆ ನಡೆಸುತ್ತಿರುವ ಮತ್ತು ಹಳೆಯದಾಗಿ ರದ್ದುಗೊಳಿಸಬೇಕಾದ ಬಸ್ಸುಗಳ ವಿವರ ಒದಗಿಸುವುದು;</td><td>ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (NWKRTC) ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (KKRTC) ವ್ಯಾಪ್ತಿಯಲ್ಲಿ ಪ್ರಸ್ತುತ ಸಾರ್ವಜನಿಕರ ಸಂಚಾರಕ್ಕೆ ಇರುವ ಒಟ್ಟು ಬಸ್ಸುಗಳ ವಿವರ ಈ ಕೆಳಕಂಡಂತಿದೆ:-
<table>
<tr><th>ಸಂಸ್ಥೆ/ನಿಗಮ</th><th>ಬಸ್‌ಗಳ ಸಂಖ್ಯೆ</th></tr>
<tr><td>ವಾ.ಕ.ರ.ಸಾ.ನಿಗಮ</td><td>5429</td></tr>
<tr><td>ಕ.ಕ.ರ.ಸಾ.ನಿಗಮ</td><td>4812</td></tr>
</table>
ಮೇಲ್ಕಂಡ ಎಲ್ಲಾ ಬಸ್ಸುಗಳನ್ನು ಅವಶ್ಯಕ ನಿರ್ವಹಣೆ ಕೈಗೊಂಡು, ಸುಸ್ಥಿತಿಯಲ್ಲಿ ಮಾರ್ಗದ ಮೇಲೆ ಕಾರ್ಯಾಚರಣೆಗೆ ಒದಗಿಸಲಾಗಿರುತ್ತದೆ.<br>
ಕೇಂದ್ರ ಸರ್ಕಾರದ ಅಧಿಸೂಚನೆಯಂತೆ 15 ವರ್ಷ ಪೂರೈಸಿದ ವಾಹನಗಳ ನೋಂದಣಿ ರದ್ದಾಗುತ್ತಿದ್ದಂತೆ ಸದರಿ ಬಸ್‌ಗಳನ್ನು ನಿರುಪಯುಕ್ತಗೊಳಿಸಲಾಗುತ್ತಿದೆ. ಅದರಂತೆ, 2026-27ನೇ ಸಾಲಿನಲ್ಲಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಲ್ಲಿ ನಿಷ್ಕ್ರಿಯಗೊಳ್ಳುವ/ನಿಷ್ಕ್ರಿಯಗೊಳಿಸಲಾಗುವ ಒಟ್ಟು ಬಸ್‌ಗಳ ಸಂಖ್ಯೆ ಈ ಕೆಳಕಂಡಂತಿದೆ.
<table>
<tr><th>ಸಂಸ್ಥೆ/ನಿಗಮ</th><th>ಬಸ್‌ಗಳ ಸಂಖ್ಯೆ</th></tr>
<tr><td>ವಾ.ಕ.ರ.ಸಾ.ನಿಗಮ</td><td>538</td></tr>
<tr><td>ಕ.ಕ.ರ.ಸಾ.ನಿಗಮ</td><td>181</td></tr>
</table>
</td></tr>
<tr><td>ಆ</td><td>ಕಳೆದ ಮೂರು ವರ್ಷಗಳಲ್ಲಿ ಈ ಎರಡು ಸಂಸ್ಥೆಗಳಿಗೆ ಸರ್ಕಾರ ಮಂಜೂರು ಮಾಡಿದ ಹೊಸ ಬಸ್‌ಗಳು</td><td>ಕಳೆದ ಮೂರು ವರ್ಷಗಳಲ್ಲಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ (NWKRTC) ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ(KKRTC)ಗಳು ಖರೀದಿ ಮಾಡಲಾದ ವಿವಿಧ ಮಾದರಿಯ ಬಸ್‌ಗಳ ಸಂಖ್ಯೆ ಈ ಕೆಳಕಂಡಂತಿದೆ.</td></tr>
</table>

ಎಷ್ಟು ಮತ್ತು ಉತ್ತರ ಕರ್ನಾಟಕದ ಗ್ರಾಮೀಣ ಭಾಗಗಳಿಗೆ ಸಾರಿಗೆ ಸಂಪರ್ಕವನ್ನು ವಿಸ್ತರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: (ಸಂಪೂರ್ಣ ವಿವರ ನೀಡುವುದು)

| ಸಂಸ್ಥೆ/ನಿಗಮ | ಬಸ್‌ಗಳ ಸಂಖ್ಯೆ |
|---|---|
| ವಾ.ಕ.ರ.ಸಾ.ನಿಗಮ | 1384 |
| ಕ.ಕ.ರ.ಸಾ.ನಿಗಮ | 4812 |

ಉತ್ತರ ಕರ್ನಾಟಕದ ಗ್ರಾಮೀಣ ಭಾಗಗಳಿಗೆ ಸಾರಿಗೆ ಸಂಪರ್ಕವನ್ನು ವಿಸ್ತರಿಸಲು ಕೈಗೊಂಡಿರುವ ಕ್ರಮಗಳ ವಿವರ ಈ ಕೆಳಕಂಡಂತಿದೆ.

**ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ:**

ಪ್ರಸ್ತುತ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ 2026-27ನೇ ಸಾಲಿನಲ್ಲಿ (ಮಾರ್ಚ-2027ರ ಅಂತ್ಯದವರೆಗೆ) ಇನ್ನೂ 500 ಹೊಸ ಬಸ್‌ಗಳನ್ನು ಖರೀದಿಸುವ ಯೋಜನೆ ಇದ್ದು, ಪ್ರಸಕ್ತ ಸಾಲಿನಲ್ಲಿ ಈಗಾಗಲೇ 15 ವರ್ಷ ಪೂರ್ಣಗೊಂಡ ಒಟ್ಟು 140 ಬಸ್‌ಗಳನ್ನು ನಿರುಪಯುಕ್ತಗೊಳಿಸಿದ್ದು, ಅವುಗಳ ಬದಲಾವಣೆ ಹಾಗೂ ಹೊಸ ಮಾರ್ಗಗಳ ಕಾರ್ಯಾಚರಣೆ/ಪ್ರಯಾಣಿಕರ ಸಂಖ್ಯೆಯು ಹೆಚ್ಚಳಕ್ಕೆ ಅನುಗುಣವಾಗಿ & ಗ್ರಾಮೀಣ ಭಾಗಗಳಿಗೆ ಹೆಚ್ಚುವರಿ ಕಾರ್ಯಾಚರಣೆಗೆ ಸೇರಿ ಒಟ್ಟು 174 ಹೊಸ ಬಸ್‌ಗಳನ್ನು ನೀಡಲಾಗಿರುತ್ತದೆ.

ಸಂಸ್ಥೆಯ ವ್ಯಾಪ್ತಿಯಲ್ಲಿ 09 ವಿಭಾಗಗಳು, 58 ಘಟಕಗಳಿಂದ ಪ್ರತಿ ದಿನ 4929 ಷೆಡ್ಯೂಲ್‌ಗಳನ್ನು ಮತ್ತು 38372 ಟ್ರಿಪ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಕಳೆದ ಮೂರು ವರ್ಷದಲ್ಲಿ ಗ್ರಾಮೀಣ ಭಾಗದ ಸಾರ್ವಜನಿಕರು/ವಿದ್ಯಾರ್ಥಿಗಳ ಬೇಡಿಕೆ/ಅವಶ್ಯಕತೆಗೆ ಅನುಗುಣವಾಗಿ 362 ಷೆಡ್ಯೂಲ್‌ಗಳನ್ನು ಹಾಗೂ ಒಟ್ಟು 3666 ಟ್ರಿಪ್‌ಗಳನ್ನು ಹೆಚ್ಚಿಸಿ ಸಾರ್ವಜನಿಕ ಅಗತ್ಯತೆಗೆ ಅನುಗುಣವಾಗಿ ಪ್ರತಿ ದಿನ ಕಾರ್ಯಾಚರಣೆ ಮಾಡಲಾಗುತ್ತಿದೆ.

ಸಂಸ್ಥೆಯ ವ್ಯಾಪ್ತಿಯಲ್ಲಿ 4610 ಹಳ್ಳಿಗಳ ಪೈಕಿ 4565 ಹಳ್ಳಿಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ. 45 ಹಳ್ಳಿಗಳಿಗೆ ಬಸ್ ಸಂಚಾರ ಯೋಗ್ಯ ರಸ್ತೆ ಇರುವುದಿಲ್ಲ. ಆದಾಗ್ಯೂ ಸಹ ಸದರಿ ಹಳ್ಳಿಗಳ ಹತ್ತಿರದ ಗ್ರಾಮ/ ಮುಖ್ಯ ರಸ್ತೆಯವರೆಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ.

ವಿದ್ಯಾರ್ಥಿಗಳ/ಸಾರ್ವಜನಿಕರ ಬೇಡಿಕೆ/ಅವಶ್ಯಕತೆಗನುಗುಣವಾಗಿ ಸಾರಿಗೆಗಳನ್ನು ಹೆಚ್ಚಿಸಿ ಕಾರ್ಯಾಚರಿಸುವ ಕ್ರಮ ನಿರಂತರ ಜಾರಿಯಲ್ಲಿದೆ.

**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ:**

ಸೆಪ್ಟೆಂಬರ್-2026ರ ಅಂತ್ಯಕ್ಕೆ ಹವಾನಿಯಂತ್ರಣ ರಹಿತ ಸ್ಲೀಪರ್- 1 6 ಹವಾನಿಯಂತ್ರಿತ ಸ್ಲೀಪರ್- 1 6 ಹಾಗೂ

ಹವಾನಿಯಂತ್ರಿತ ಸೀಟರ್- 1 2 ಹೀಗೆ ಒಟ್ಟು 44 ಬಸ್ಸುಗಳು ನಿಗಮಕ್ಕೆ ಸೇರ್ಪಡೆಗೊಳ್ಳಲಿದ್ದು. 2025-26ನೇ ಸಾಲಿನ ಸರ್ಕಾರದ ಆಯವ್ಯಯದಲ್ಲಿ ನಿಗಮಕ್ಕೆ 400 ಬಸ್ಸುಗಳನ್ನು ಹಾಗೂ 2026-27ನೇ ಸಾಲಿನ ಸರ್ಕಾರದ ಆಯವ್ಯಯದಲ್ಲಿ ನಿಗಮಕ್ಕೆ 200 ಬಸ್‌ಗಳನ್ನು ಹಂಚಿಕೆ ಮಾಡಲಾಗಿರುತ್ತದೆ.

2025-26ನೇ ಸಾಲಿನ ಆಯವ್ಯಯ ಕಂಡಿಕೆ 469 (iii)ರಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಕ್ಕೆ ಹಂಚಿಕೆಯಾದ 400 ಬಸ್ಸುಗಳನ್ನು ಅಂದಾಜು ವೆಚ್ಚ ಒಟ್ಟು ರೂ.152.00 ಕೋಟಿಗಳಲ್ಲಿ ಖರೀದಿಸಲು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದ ಒದಗಿಸಿರುವ ರೂ.45.00 ಕೋಟಿಗಳನ್ನು ಉಪಯೋಗಿಸಿಕೊಂಡು ಪ್ರತಿ ಬಸ್‌ಗೆ ರೂ.38.00 ಲಕ್ಷಗಳಂತೆ ಒಟ್ಟು 119 ಬಸ್‌ಗಳನ್ನು, 2026-27ನೇ ಸಾಲಿನ ಪೂರಕ ಅಂದಾಜು-1ರಲ್ಲಿ ರಾಜ್ಯ ಸರ್ಕಾರದಿಂದ ಒದಗಿಸಲಾಗುವ ರೂ.76.00 ಕೋಟಿ ಗಳಿಂದ 200 ಬಸ್ಸುಗಳನ್ನು ಹಾಗೂ ಉಳಿದ 81 ಬಸ್‌ಗಳನ್ನು ಖರೀದಿಸಲು ತಗಲುವ ಅಂದಾಜು ಮೊತ್ತ ರೂ.30.78 ಕೋಟಿಗಳನ್ನು ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಿಂದಲೇ (KKRDB) ಪಡೆದು ಖರೀದಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಪ್ರಸ್ತಾವನೆಗೆ ಸಚಿವ ಸಂಪುಟವು ಅನುಮೋದಿಸಿದ್ದು, ಅದರಂತೆ, ಟೆಂಡರ್ ಕರೆದು ಬಸ್ಸುಗಳನ್ನು ಖರೀದಿಸಲು ಕ್ರಮ ಕೈಗೊಳ್ಳಲಾಗುವುದು.

2026-27ನೇ ಸಾಲಿನಲ್ಲಿ ಖರೀದಿಸಲಾಗುವ ಬಸ್‌ಗಳನ್ನು ನಿಯಮಾನುಸಾರ ವಿಭಾಗಗಳ ಅವಶ್ಯಕತೆಗೆ ಅನುಗುಣವಾಗಿ ಬಸ್ಸುಗಳನ್ನು ಹಂಚಿಕೆ ಮಾಡಲಾಗುವುದು.

ನಿಗಮದ 5 ನಗರಗಳಿಗೆ 150 ನಗರ ಸಾರಿಗೆ ಬಸ್ಸುಗಳ ಖರೀದಿಗೆ ಅನುದಾನ ಮಂಜೂರಾತಿಗಾಗಿ ನಗರ ಭೂ-ಸಾರಿಗೆ ನಿರ್ದೇಶನಾಲಯಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವ್ಯಾಪ್ತಿಯಲ್ಲಿ 09 ವಿಭಾಗಗಳು, 53 ಘಟಕಗಳಿಂದ ಪ್ರತಿ ದಿನ 4657 ಷೆಡ್ಯೂಲ್‌ಗಳನ್ನು ಮತ್ತು 281131 ಟ್ರಿಪ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಕಳೆದ ಮೂರು ವರ್ಷದಲ್ಲಿ ಗ್ರಾಮೀಣ ಭಾಗದ ಸಾರ್ವಜನಿಕರು/ವಿದ್ಯಾರ್ಥಿಗಳ ಬೇಡಿಕೆ/ಅವಶ್ಯಕತೆಗೆ ಅನುಗುಣವಾಗಿ 629 ಶೆಡ್ಯೂಲ್‌ಗಳನ್ನು ಹಾಗೂ ಒಟ್ಟು 5917 ಟ್ರಿಪ್‌ಗಳನ್ನು ಹೆಚ್ಚಿಸಿ ಸಾರ್ವಜನಿಕ ಅಗತ್ಯತೆಗೆ ಅನುಗುಣವಾಗಿ ಪ್ರತಿ ದಿನ ಕಾರ್ಯಾಚರಣೆ ಮಾಡಲಾಗುತ್ತಿದೆ.

ಸಂಸ್ಥೆಯ ವ್ಯಾಪ್ತಿಯಲ್ಲಿ 5283 ಹಳ್ಳಿಗಳ ಪೈಕಿ 5243 ಹಳ್ಳಿಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ. 40 ಹಳ್ಳಿಗಳಿಗೆ ಬಸ್ ಸಂಚಾರ ಯೋಗ್ಯ ರಸ್ತೆ ಇರುವುದಿಲ್ಲ. ಆದಾಗ್ಯೂ ಸಹ ಸದರಿ ಹಳ್ಳಿಗಳ ಹತ್ತಿರದ

| | | |
|---|---|---|
| | | ಗ್ರಾಮ/ ಮುಖ್ಯ ರಸ್ತೆಯವರೆಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ.<br>ಪ್ರಸ್ತುತ ಕಲ್ಪಿಸಿರುವ ಸಾರಿಗೆ ಸೌಲಭ್ಯದ ಪ್ರಯೋಜನವನ್ನು ಈ ಭಾಗದ ಸಾರ್ವಜನಿಕರು ಹಾಗೂ ಶಾಲಾ-ಕಾಲೇಜು ವಿದ್ಯಾರ್ಥಿಗಳು ಪಡೆದುಕೊಳ್ಳುತ್ತಿದ್ದಾರೆ. |
| ಇ | ಈ ಭಾಗದ ಪ್ರಮುಖ ನಗರ ಹಾಗೂ ಗ್ರಾಮೀಣ ಬಸ್ ನಿಲ್ದಾಣಗಳು ಮೂಲಭೂತ ಸೌಕರ್ಯಗಳ ಕೊರತೆಯಿಂದ (ಶೌಚಾಲಯ, ಕುಡಿಯುವ ನೀರು, ಆಸನ ವ್ಯವಸ್ಥೆ ಮತ್ತು ಸ್ವಚ್ಛತೆ) ಕಂಗೆಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಪ್ರಸ್ತ ಸಾಲಿನಲ್ಲಿ ಇವುಗಳ ಆಧುನೀಕರಣಕ್ಕಾಗಿ ಕಾಯ್ದಿರಿಸಿದ ಅನುದಾನ ಎಷ್ಟು; | **ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ:-**<br><br>ಪ್ರಸಕ್ತ ಸಾಲಿನಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ/ನವೀಕರಣಕ್ಕಾಗಿ/ಹೊಸ ಬಸ್ ನಿಲ್ದಾಣ/ಘಟಕ ನಿರ್ಮಾಣಕ್ಕಾಗಿ ಆಯವ್ಯಯದಲ್ಲಿ ಯಾವುದೇ ಅನುದಾನ ನಿಗದಿಯಾಗಿರುವುದಿಲ್ಲ. ಪ್ರಸಕ್ತ 2026-27ನೇ ಸಾಲಿನಲ್ಲಿ ಸಂಸ್ಥೆಯ ಆಂತರಿಕ ಸಂಪನ್ಮೂಲದಿಂದ ರೂ. 4 0 5 . 2 5 ಲಕ್ಷಗಳ ಅನುದಾನವನ್ನು ಬಳಸಿಕೊಂಡು ಪ್ರಮುಖ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಸಂಸ್ಥೆಯ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಕುಡಿಯುವ ನೀರು ಹಾಗೂ ಆಸನ ವ್ಯವಸ್ಥೆಗಳನ್ನು ಕಲ್ಪಿಸಲಾಗುವುದು.<br>ಮುಂದುವರೆದು, ಸಂಸ್ಥೆಯ ವ್ಯಾಪ್ತಿಯ ಪ್ರಮುಖ ನಗರ ಮತ್ತು ಗ್ರಾಮೀಣ ಭಾಗದ ಒಟ್ಟು 176 ಬಸ್ ನಿಲ್ದಾಣಗಳ ಸ್ವಚ್ಛತೆ ಮತ್ತು ಶೌಚಾಲಯಗಳ ನಿರ್ವಹಣೆಗಾಗಿ ಈ ಟೆಂಡರ್ ಮೂಲಕ 7 4 ಬಸ್ ನಿಲ್ದಾಣಗಳಿಗೆ ಗುತ್ತಿಗೆದಾರರನ್ನು ಆಯ್ಕೆ ಮಾಡಿ, ಗುತ್ತಿಗೆದಾರರ ಮೂಲಕ ಬಸ್ ನಿಲ್ದಾಣಗಳ ಸ್ವಚ್ಛತೆಗೆ ಕ್ರಮ ವಹಿಸಲಾಗುತ್ತಿದೆ. ಇನ್ನುಳಿದ 102 ಬಸ್ ನಿಲ್ದಾಣಗಳಿಗೆ ಸ್ಥಳೀಯ ವ್ಯವಸ್ಥೆಯ ಮೂಲಕ ನಿಲ್ದಾಣಗಳ ಸ್ವಚ್ಛತೆಗೆ ಕ್ರಮ ವಹಿಸಲಾಗುತ್ತಿದೆ.<br>ಪ್ರಮುಖ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಕುಡಿಯುವ ನೀರು ಹಾಗೂ ಆಸನ ವ್ಯವಸ್ಥೆಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಸಂಸ್ಥೆಯ ವತಿಯಿಂದ ಕ್ರಮ ಕೈಗೊಳ್ಳಲಾಗಿದೆ.<br><br>**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ:-**<br><br>ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದಡಿಯಲ್ಲಿ ಜಿಲ್ಲಾ, ತಾಲ್ಲೂಕು ಹಾಗೂ ಹೋಬಳಿ ಮಟ್ಟದ ಪ್ರಮುಖ ಬಸ್ ನಿಲ್ದಾಣಗಳಲ್ಲಿ ಅವಶ್ಯಕ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಆಸನಗಳ ವ್ಯವಸ್ಥೆ ಇತ್ಯಾದಿಗಳನ್ನು ಕಲ್ಪಿಸಲಾಗಿರುತ್ತದೆ ಹಾಗೂ ಕಾಲಕಾಲಕ್ಕೆ ಅವಶ್ಯಕ ದುರಸ್ಥಿ ಹಾಗೂ ಉನ್ನತೀಕರಣ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ.<br><br>ಸಂಸ್ಥೆಯ ವ್ಯಾಪ್ತಿಯ ಪ್ರಮುಖ ನಗರ ಮತ್ತು ಗ್ರಾಮೀಣ ಭಾಗದ ಒಟ್ಟು 167 ಬಸ್ ನಿಲ್ದಾಣಗಳ ಸ್ವಚ್ಛತೆ ಮತ್ತು |

| | | |
|---|---|---|
| | | ಶೌಚಾಲಯಗಳ ನಿರ್ವಹಣೆಗಾಗಿ ಈ ಟೆಂಡರ್ ಮೂಲಕ 157 ಬಸ್ ನಿಲ್ದಾಣಗಳಿಗೆ ಗುತ್ತಿಗೆದಾರರನ್ನು ಆಯ್ಕೆ ಮಾಡಿ, ಗುತ್ತಿಗೆದಾರರ ಮೂಲಕ ಬಸ್ ನಿಲ್ದಾಣಗಳ ಸ್ವಚ್ಛತೆಗೆ ಕ್ರಮ ವಹಿಸಲಾಗುತ್ತಿದೆ. ಇನ್ನುಳಿದ 10 ಬಸ್ ನಿಲ್ದಾಣಗಳಿಗೆ ಸ್ಥಳೀಯ ವ್ಯವಸ್ಥೆಯ ಮೂಲಕ ನಿಲ್ದಾಣಗಳ ಸ್ವಚ್ಛತೆಗೆ ಕ್ರಮ ವಹಿಸಲಾಗುತ್ತಿದೆ.<br><br>ಪ್ರಸಕ್ತ 2026-2027ನೇ ಸಾಲಿನಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶಗಳ ಸಂಸ್ಥೆಯ ಬಸ್ ನಿಲ್ದಾಣಗಳಲ್ಲಿ ಪ್ರಯಾಣಿಕರಿಗೆ ಅಗತ್ಯವಿರುವ ಮೂಲಭೂತ ಸೌಕರ್ಯಗಳಾದ ಶೌಚಾಲಯ ಕುಡಿಯುವ ನೀರು ಹಾಗೂ ಆಸನ ವ್ಯವಸ್ಥೆಗಳನ್ನು ಕಲ್ಪಿಸಲು ನಿಗಮದ ಆಂತರಿಕ ಸಂಪನ್ಮೂಲದಿಯಲ್ಲಿ ರೂ.800.00 ಲಕ್ಷಗಳ ಅನುದಾನ ಕಾಯ್ದಿರಿಸಲಾಗಿದ್ದು, ಪ್ರಸಕ್ತ ಸಾಲಿನಲ್ಲಿ ಮೂಲಭೂತ ಸೌಕರ್ಯ ಅಭಿವೃದ್ಧಿಗಾಗಿ/ ನವೀಕರಣಕ್ಕಾಗಿ/ಹೊಸ ಬಸ್ ನಿಲ್ದಾಣ/ಘಟಕ ನಿರ್ಮಾಣಕ್ಕಾಗಿ ಆಯವ್ಯಯದಲ್ಲಿ ಯಾವುದೇ ಅನುದಾನ ನಿಗದಿಯಾಗಿರುವುದಿಲ್ಲ. |
| ಈ | ಶಕ್ತಿ ಯೋಜನೆಯು ಜಾರಿಯ ನಂತರ ಉತ್ತರ ಕರ್ನಾಟಕದ ಭಾಗದಲ್ಲಿ ಮಹಿಳಾ ಪ್ರವಾಸಿಗರು ಮತ್ತು ಪ್ರಯಾಣಿಕರ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದ್ದು, ಅದಕ್ಕನುಗುಣವಾಗಿ ಹೆಚ್ಚುವರಿ ಬಸ್ಸುಗಳ ಹಾಗೂ ಚಾಲಕ/ ನಿರ್ವಾಹಕ ಮತ್ತು ತಾಂತ್ರಿಕ ಸಿಬ್ಬಂದಿಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | **ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ:-**<br>ಶಕ್ತಿ ಯೋಜನೆ ಜಾರಿಯಾದ ನಂತರ ಪ್ರಯಾಣಿಕರ ಸಂಖ್ಯೆ ಗಣನೀಯವಾಗಿ ಹೆಚ್ಚಳವಾಗಿದ್ದು, ಜನಸಂಖ್ಯೆ ಜನದಟ್ಟಣೆಗೆ ಅನುಗುಣವಾಗಿ ಬೇಡಿಕೆ/ ಅವಶ್ಯಕತೆಗನುಗುಣವಾಗಿ ಪ್ರತಿ ದಿನ 3666 ಹೆಚ್ಚುವರಿ ಸರತಿಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಅಂದರೆ ಶಕ್ತಿ ಯೋಜನೆ ಜಾರಿಗೂ ಮೊದಲು 4567 ಷೆಡ್ಯೂಲ್‌ಗಳಿಂದ 34676 ಟ್ರಿಪ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಪ್ರಸ್ತುತ 4929 ಷೆಡ್ಯೂಲ್‌ಗಳಿಂದ 38372 ಟ್ರಿಪ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಪ್ರತಿ ದಿನ 362 ಷೆಡ್ಯೂಲ್‌ಗಳನ್ನು ಹಾಗೂ ಒಟ್ಟು 3666 ಟ್ರಿಪ್‌ಗಳನ್ನು ಜನದಟ್ಟಣೆ ಹೆಚ್ಚಿಗೆ ಇರುವ ಗ್ರಾಮೀಣ ಭಾಗದಲ್ಲಿ ಹೆಚ್ಚಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.<br><br>ಅದರಂತೆ, 2023-24ನೇ ಸಾಲಿನಿಂದ ಇಲ್ಲಿಯವರೆಗೆ ಒಟ್ಟು 1384 ಹೊಸ ಬಸ್ಸುಗಳನ್ನು ಖರೀದಿಸಲಾಗಿರುತ್ತದೆ. 2026-27ನೇ ಸಾಲಿನಲ್ಲಿ ಇನ್ನೂ 500 ಬಸ್ಸುಗಳನ್ನು ಖರೀದಿಸಲು ಯೋಜಿಸಲಾಗಿದೆ. ಹಾಗೆಯೇ ಈವರೆಗೆ 2000 ಚಾಲಕ ಹಾಗೂ ಚಾಲಕ-ಕಂ-ನಿರ್ವಾಹಕರನ್ನು ನೇಮಕಾತಿ ಮಾಡಿ ಕೆಲಸಕ್ಕೆ ನಿಯೋಜಿಸಲಾಗಿದೆ. ಬಸ್ಸುಗಳ ನಿರ್ವಹಣೆಗಾಗಿ ತಾಂತ್ರಿಕ ಸಿಬ್ಬಂದಿಗಳ ಕೊರತೆಯನ್ನು ನೀಗಿಸಲು ಒಟ್ಟು 619 ಹೊರ ಗುತ್ತಿಗೆ ಆಧಾರದ ಮೇಲೆ ತಾಂತ್ರಿಕ ಸಿಬ್ಬಂದಿಗಳನ್ನು ನಿಯೋಜಿಸಿಕೊಳ್ಳಲಾಗಿರುತ್ತದೆ.<br><br>**ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ:**<br>ಶಕ್ತಿ ಯೋಜನೆ ಜಾರಿಯಾದ ನಂತರ ಪ್ರಯಾಣಿಕರ ಸಂಖ್ಯೆ |

| | | |
|---|---|---|
| | | ಗಣನೀಯವಾಗಿ ಹೆಚ್ಚಳವಾಗಿದ್ದು, ಜನಸಂಖ್ಯೆ ಜನದಟ್ಟಣೆಗೆ ಅನುಗುಣವಾಗಿ ಬೇಡಿಕೆ/ ಅವಶ್ಯಕತೆಯಂತೆ ಪ್ರತಿ ದಿನ 629 ಹೆಚ್ಚಿನ ಷೆಡ್ಯೂಲ್‌ಗಳಿಂದ 5917 ಹೆಚ್ಚುವರಿ ಟ್ರಿಪ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ. ಅಂದರೆ ಶಕ್ತಿ ಯೋಜನೆ ಜಾರಿಗೂ ಮೊದಲು 4028 ಷೆಡ್ಯೂಲ್‌ಗಳಿಂದ 22214 ಟ್ರಿಪ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿತ್ತು. ಪ್ರಸ್ತುತ 4657 ಷೆಡ್ಯೂಲ್‌ಗಳಿಂದ 28131 ಟ್ರಿಪ್‌ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.<br>ಮುಂದುವರೆದು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮವು ಅನುಸೂಚಿಗಳ ಕಾರ್ಯಾಚರಣೆಗೆ ಅವಶ್ಯಕ ಚಾಲಕ/ ನಿರ್ವಾಹಕ ಮತ್ತು ತಾಂತ್ರಿಕ ಸಿಬ್ಬಂದಿಗಳ ಕೊರತೆಯನ್ನು ನೀಗಿಸಲು ಈ ಕೆಳಕಂಡಂತೆ ಕ್ರಮವಹಿಸಿದೆ.<br>• 3 0 0 ನಿರ್ವಾಹಕ ಹುದ್ದೆಗಳ ನೇರ ನೇಮಕಾತಿ ಪ್ರಕ್ರಿಯೆಯನ್ನು ಜುಲೈ-2026ರಲ್ಲಿ ಮುಕ್ತಾಯಗೊಳಿಸಿದೆ.<br>• ಪ್ರಸ್ತುತ, ನಿಗಮದ ಅನುಸೂಚಿಗಳ ಕಾರ್ಯಾಚರಣೆಗೆ 1 0 1 7 ಖಾಸಗಿ ಚಾಲಕರನ್ನು ಹೊರಗುತ್ತಿಗೆ ಮೂಲಕ ಪಡೆಯಲಾಗುತ್ತಿದೆ.<br>• 2 1 1 5 ನಿರ್ವಾಹಕ ಹಾಗೂ 584 ತಾಂತ್ರಿಕ ಸಿಬ್ಬಂದಿ ಹುದ್ದೆಗಳ ನೇರ ನೇಮಕಾತಿಗೆ ಅನುಮತಿ ಕೋರಿರುವ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |

ಸಂಖ್ಯೆ: ಟಿಡಿ 214 ಟಿಸಿಕ್ಯೂ 2026

(ಬಿ.ಎಸ್. ಸುರೇಶ)

ಸಾರಿಗೆ ಸಚಿವರು